## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಸಾರ್ವಜನಿಕ/ಸರ್ಕಾರಿ ನೌಕರರಾದ ತುಮಕೂರು ತಾಲ್ಲೂಕು ಮತ್ತು ಜಿಲ್ಲೆ ಊರುಕೆರೆ ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಶ್ರೀ ಜಗದೀಶರವರು ಕರ್ತವ್ಯ ಲೋಪ/ದುರ್ವತನೆ ಎಸಗಿರುವ ಬಗ್ಗೆ.

**ಓದಲಾಗಿದೆ:** ಮಾನ್ಯ ನಿಬಂಧಕರು, ಮಾನ್ಯ ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ಅರೆ ಸರ್ಕಾರಿ ಪತ್ರ ಸಂಖ್ಯೆ: D.O.No.Compt/BD-785/2015/ARLO1 ದಿನಾಂಕ: 05-05-2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ದಿನಾಂಕ: 21-04-2017 ರವರ ಪತ್ರದೊಂದಿಗೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ಕಲಂ 9 ರನ್ವಯ ಮಾನ್ಯ ಉಪಲೋಕಾಯುಕ್ತರವರ ಸಲ್ಲಿಸಿರುವ ವರದಿಯಲ್ಲಿ ತುಮಕೂರು ಜಿಲ್ಲೆ ಮತ್ತು ತಾಲ್ಲೂಕು ಜನತಾ ಕಾಲೋನಿ ಊರುಕೆರೆ ಅಂಚೆಯ ನಿವಾಸಿಯಾದ ಶ್ರೀಮತಿ ಗಂಗಮ್ಮ ಕೇರಾಫ್ ಲೇ.ಅಶ್ವಥ (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ ತುಮಕೂರು ಜಿಲ್ಲೆ ಮತ್ತು ತಾಲ್ಲೂಕು (1) ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಯಾಗಿದ್ದ ಶ್ರೀ ರಾಮಾಂಜನೇಯ ಮತ್ತು 2) ಊರುಕೆರೆ ಗ್ರಾಮ ಪಂಚಾಯತ್ ಕಾರ್ಯದರ್ಶಿ, ಶ್ರೀ ಜಗದೀಶ (ಇನ್ನು ಮುಂದೆ "1 ಮತ್ತು 2ನೇ ಎದುರುದಾರರು" ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ಕರ್ತವ್ಯ ಲೋಪದ ಬಗ್ಗೆ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಳ್ಳಲಾಗಿದೆಂದು ತಿಳಿಸಿರುತ್ತಾರೆ.

**ದೂರಿನ ಸಂಕ್ಷಿಪ್ತ ವಿವರಣೆ:-**

ದೂರುದಾರರು ತಮ್ಮ ದೂರಿನಲ್ಲಿ ತುಮಕೂರು ಜಿಲ್ಲೆ ಮತ್ತು ತಾಲ್ಲೂಕು ಊರುಕೆರೆ ಗ್ರಾಮದ ಜನತಾ ಕಲೋನಿಯ ನಿವೇಶನ ಸಂ:11 ಖಾತಾ ನಂ.2051ರ ಖಾತೆಯನ್ನು ಎದುರುದಾರರು ಯಾವುದೇ ದಕರಣವಿಲ್ಲದೇ ವಜಾ ಮಾಡಿರುವುದಾಗಿ ಹೇಳಿದ್ದಾರೆ. ದೂರಿಗೆ ಎದುರುದಾರರಿಂದ ಆಕ್ಷೇಪಣೆಯನ್ನು ಕೇಳಲಾಗಿ, 1ನೇ ಎದುರುದಾರರು ಯಾವುದೇ ಆಕ್ಷೇಪಣೆಯನ್ನು ಸಲ್ಲಿಸಿಲ್ಲ.

**ಎರಡನೇ(2ನೇ)ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ:-**

ದೂರುದಾರರ ಹೆಸರಿನಲ್ಲಿರುವ ಹಕ್ಕು ಪತ್ರ ಹಾಗೂ ಪಂಚಾಯತ್ ಖಾತಾ ನಂ.2051ರ ಬಗ್ಗೆ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ಸಿ ನ್ಯಾಯಾಲಯ, ತುಮಕೂರು ರವರಲ್ಲಿ ಅಸಲು ಧಾವಾ ಸಂ:253/2007ರ ಪ್ರಕರಣದಲ್ಲಿ ಅಂತಿಮ ತೀರ್ಮಾನವಾಗಿ ಶ್ರೀಮತಿ ರಾಜಮ್ಮ ಕೋಂ ರಾಮಚಂದ್ರಯ್ಯ, ಊರುಕೆರೆ ಗ್ರಾಮ ರವರ ಪರವಾಗಿ ಡಿಕ್ರಿಯಾಗಿದೆ. ಸದರಿ ಡಿಕ್ರಿಯ ಆಧಾರದ ಮೇಲೆ ಸದರಿ ಖಾತಾವನ್ನು 1ನೇ ಎದುರುದಾರರ ನಿರ್ದೇಶನದಂತೆ ಕ್ರಮ ವಹಿದಲಾಗಿದೆಯೆಂದು ಹೇಳಿದ್ದಾರೆ. ಎದುರುದಾರರ ಆಕ್ಷೇಪಣೆಗೆ ದೂರುದಾರರಿಂದ ಪ್ರತ್ಯುತ್ತರವನ್ನು ಕೇಳಲಾಗಿ, ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ ಎದುರುದಾರರ ಆಕ್ಷೇಪಣೆಗೆಯನ್ನು ಅಲ್ಲಗಳೆದು, ದೂರಿನ ಅಂಶಗಳನ್ನೇ ಪುನರುಚ್ಚರಿಸಿದ್ದಾರೆ.

**ಕಡತ ಮತ್ತು ದಾಖಲೆಗಳನ್ನು ಕುಲಂಕುಶವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ:-**

ಸದರಿ ಸ್ವತ್ತು ದೂರುದಾರರ ಪತಿ ಶ್ರೀ ಅಶ್ವಥ್ ಎಂಬುವವರಿಗೆ ದಿ:30/04/1987ರಂದು ಮಂಜೂರಾಗಿದೆ. ಅದರಂತೆ, ಪಂಚಯತ್ನ ಎಲ್ಲಾ ದಾಖಲೆಗಳು ದೂರುದಾರರ ಪತಿಯ ಹೆಸರಿನಲ್ಲೇ ಮುಂದುವರೆದಿದ್ದು, ಅವರು ಮೃತಪಟ್ಟ ನಂತರ, ಸದರಿ ಸ್ವತ್ತು ದೂರುದಾರರ ಹೆಸರಿಗೆ ದಾಖಲಾಗಿ 2015-16 ಸಾಲಿನಲ್ಲಿಯೂ ಸಹ ದೂರುದಾರರ ಹೆಸರಿನಲ್ಲೇ ಮುಂದುವರೆದುಕೊಂಡು ಬಂದಿದೆ. ಸದರಿ ಸ್ವತ್ತಿಗೆ ಸಂಬಂಧಪಟ್ಟಂತೆ ದೂರುದಾರರ ಪತಿ ಮತ್ತು ದೂರುದಾರರು ತೆರಿಗೆ ಪಾವತಿಸಿರುವುದು ಸಹ ದಾಖಲೆಗಳಿಂದ ಕಂಡು ಬಂದಿದೆ. ಶ್ರೀಮತಿ ರಾಜಮ್ಮ ಕೋಂ ರಾಮಚಂದ್ರಯ್ಯ ರವರು ದೂರುದಾರರ ವಿರುದ್ಧ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ, ತುಮಕೂರು ರವರಲ್ಲಿ ಅಸಲು ಧಾವಾ ಸಂ:253/2007ರಂತೆ ಪ್ರಕರಣ ದಾಖಲಿಸಿದ್ದು, ಸದರಿ ಪ್ರಕರಣದಲ್ಲಿ ದೂರುದಾರರ ವಿರುದ್ಧ ಶಾಶ್ವತ ನಿರ್ಭಂದಕಾಜ್ಞೆ ಮಂಜೂರಾಗಿದೆ. ಸದರಿ ಪ್ರಕರಣದ ಹಾಳೆಯನ್ನು ಪರಿಶೀಲಿಸಲಾಗಿ, ಶ್ರೀಮತಿ ರಾಜಮ್ಮ ಎಂಬುವವರು ದೂರುದಾರರ ವಿರುದ್ಧ ಖಾತಾ ಸಂ:340ರ ಬಗ್ಗೆ ಸಲ್ಲಿಸಿದ್ದು, ಸದರಿ ಸ್ವತ್ತಿಗೆ ಸಂಬಂಧಿಸಿದಂತೆ ದೂರುದಾರರ ವಿರುದ್ಧ ಶಾಶ್ವತ ನಿರ್ಭಂದಕಾಜ್ಞೆ ಆದೇಶವಾಗಿದೆ. ಆದರೆ, ದೂರುದಾರರಿಗೆ ಸರ್ಕಾರದಿಂದ ಮಂಜೂರಾದ ನಿವೇಶನ ಸಂ:11 ಖಾತಾ ನಂ.2051 ಸ್ವತ್ತು ಮಂಜೂರಾಗಿರುತ್ತದೆ. ಅಸಲು ಧಾವಾ ಸಂ:253/2007ರಲ್ಲಿ ನಮೂದಿಸಲಾದ ಸ್ವತ್ತು, ದೂರುದಾರರಿಗೆ ಮಂಜೂರಾದ ಸ್ವತ್ತು ಬೇರೆ ಬೇರೆಯಾಗಿವೆ. ಎದುರುದಾರರು ನ್ಯಾಯಾಲಯದ ತೀರ್ಪಿನಲ್ಲಿ ನಮೂದಿಸಲಾದ ಸ್ವತ್ತಿನ ಬಗ್ಗೆ ಸರಿಯಾದ ರೀತಿ ಪರಿಶೀಲನೆ ಮಾಡದೇ ದೂರುದಾರರ ಹೆಸರಿನಲ್ಲಿದ್ದ ಸ್ವತ್ತಿನ ಖಾತೆಯನ್ನು ವಜಾ ಮಾಡಿದ್ದಾರೆ. ಎದುರುದಾರರು ಸದರಿ ಸ್ವತ್ತಿನ ದಾಖಲೆಗಳನ್ನು ಸರಿಯಾದ ರೀತಿ ಪರಿಶೀಲನೆ ಮಾಡದೇ ದೂರುದಾರರ ಹೆಸರಿನಲ್ಲಿದ್ದ ಸ್ವತ್ತಿನ ಖಾತೆಯನ್ನು ವಜಾ ಮಾಡಿ, ಕರ್ತವ್ಯ ಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ.

ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು ದಾಖಲಾತಿಗಳು ಹಾಗೂ ಎದುರುದಾರರ ಆಕ್ಷೇಪಣೆಯನ್ನು ಕೂಲಂಕುಷವಾಗಿ ಪರಿಶೀಲಿಸಿದಾಗ, ಸದರಿ 2ನೇ ಎದುರುದಾರರ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ/ಸಮಂಜಸ/ಸಮಾಧಾನಕರ ಕಾರಣ ಇಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿದೆ.

ಒಂದನೇ (1ನೇ) ಎದುರುದಾರರು ನಿವೃತ್ತಿಯಾಗಿ 4 ವರ್ಷಗಳಾಗಿರುವುದರಿಂದ, ಕೆಸಿಎಸ್‌ಆರ್ ನಿಯಮ 214(2)(ಬಿ) ಅಡಿಯಲ್ಲಿ ವಿಚಾರಣೆ ಕೈಗೊಳ್ಳಲು ಅವಕಾಶ ಇಲ್ಲದಿರುವುದರಿಂದ, 1ನೇ ಎದುರುದಾರರ ವಿರುದ್ಧದ ನಡವಳಿಯನ್ನು ಕೈಬಿಡಲಾಗಿದೆ.

ಕಡತದ ಸಂಗತಿಗಳು ಹಾಗೂ ದಾಖಲಾತಿಗಳು, 2ನೇ ಎದುರುದಾರರು ಸರ್ಕಾರಿ/ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠತೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ದುರ್ನಡತೆ ಮೇಲ್ನೋಟಕ್ಕೆ ಕಂಡು ಬರುತ್ತದೆ.

ಅದಲ್ಲದೆ 2ನೇ ಎದುರುದಾರರು ಸರ್ಕಾರಿ ನೌಕರರಾಗಿದ್ದು, ಎದುರುದಾರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ 1966ರ ನಿಯಮ 3(1) ಅಡಿಯಲ್ಲಿ ರನ್ವಯ ದುರ್ನಡತೆ/ದುರ್ವತನೆ ಕಂಡು ಬಂದಿರುವುದರಿಂದ, ಸದರಿ ಎದುರುದಾರರ ವಿರುದ್ಧ ಇಲಾಖಾ ಶಿಸ್ತು ಕ್ರಮ ಕೈಗೊಳ್ಳಲು, ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3)ರ ಅಡಿ ಪ್ರದತ್ತವಾದ ಅಧಿಕಾರದಡಿ ಈ ವರದಿ ಮೂಲಕ ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ ಎಂದು ತಿಳಿಸಿರುತ್ತಾರೆ. ಹಾಗೂ 2ನೇ ಎದುರುದಾರರ ವಿರುದ್ಧದ ಇಲಾಖಾ ವಿಚಾರಣೆ ಮಾಡಲು ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 14-ಎ ರಡಿಯಲ್ಲಿ ಈ ಸಂಸ್ಥೆಗೆ ವಹಿಸಬೇಕೆಂದು ಕೋರಿದೆ.

ಮಾನ್ಯ ಉಪ ಲೋಕಾಯುಕ್ತರು-2 ಬೆಂಗಳೂರು ರವರ ವರದಿಯನ್ನು ಪರಿಶೀಲಿಸಿ, ಶ್ರೀ ಜಗದೀಶ ಕಾರ್ಯದರ್ಶಿ, ಊರುಕೆರೆ ಗ್ರಾಮ ಪಂಚಾಯಿತಿ, ತುಮಕೂರು ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಇವರ ವಿರುದ್ಧ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ಸಿಸಿಎ) ನಿಯಮಗಳು, 1957 ರ ನಿಯಮ 14-ಎ ರನ್ವಯ ಮಾನ್ಯ ಉಪಲೋಕಾಯುಕ್ತ ರವರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/436/ಗ್ರಾಪಂಕಾ/2017, ಬೆಂಗಳೂರು, ದಿನಾಂಕ: 02-06-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಜಗದೀಶ ಕಾರ್ಯದರ್ಶಿ, ಊರುಕೆರೆ ಗ್ರಾಮ ಪಂಚಾಯಿತಿ, ತುಮಕೂರು ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧದ ಆಪಾದನೆಗಳ ಬಗ್ಗೆ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14(ಎ) ರನ್ವಯ ಈ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ ರವರಿಗೆ ವಹಿಸಲಾಗಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ಪಿ. ಅರುಣ್‌ಕುಮಾರ್)
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ:**

1) ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಪುಟ ಸಂಖ್ಯೆ 1 ರಿಂದ 57 ರವರೆಗಿನ ಮೂಲದಾಖಲೆಗಳನ್ನು ಈ ಪತ್ರದೊಂದಿಗೆ ಹಿಂದಿರುಗಿಸಲಾಗಿದೆ)
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ.
5) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ತುಮಕೂರು ತಾಲ್ಲೂಕು ಮತ್ತು ಜಿಲ್ಲೆ.
6) ಶ್ರೀ ಜಗದೀಶ ಕಾರ್ಯದರ್ಶಿ, ಊರುಕೆರೆ ಗ್ರಾಮ ಪಂಚಾಯಿತಿ, ತುಮಕೂರು ತಾಲ್ಲೂಕು ಮತ್ತು ಜಿಲ್ಲೆ.
7) ಗಣಕ ಕೋಶ-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.